ಸಿ.ಸಿ. ನಂಬರಃ 2111/2024

ಪಿ.ಡಬ್ಲ್ಯೂಃ 1

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 23-01-2026**

**(ಸಾಕ್ಷಿಯ ಸ್ವಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲಾಗಿರುತ್ತದೆ.)**

**ಮುಂದುವರೆದ ಮುಖ್ಯ ವಿಚಾರಣೆಃ ಫಿರ್ಯಾದುದಾರರ ಪರ ಶ್ರೀ ಆರ್.ಎಂ.ಎನ್. ವಕೀಲರಿಂದ,**

ನನಗೆ ಈ ಪ್ರಕರಣವನ್ನು ನಡೆಸಲು ಫಿರ್ಯಾದಿ ಸೊಸೈಟಿಯವರು ಅಧಿಕಾರ ನೀಡಿರುವುದಕ್ಕೆ ಸಂಬಂಧಿಸಿದಂತೆ ಠರಾವಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿ ಕೊಟ್ಟ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕಿನ ಚೆಕ್ ಸಂಖ್ಯೆ 000770 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಚೆಕ್‌ನಲ್ಲಿರುವ ಆರೋಪಿಯ ಸಹಿಯನ್ನು ನಿಪಿ-2(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ನಿಪಿ-3 ಎಂದು, ಆರೋಪಿಗೆ ವಕೀಲರ ಮೂಲಕ ಕೊಟ್ಟ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಆರೋಪಿ ಕಳುಹಿಸಿದ ನೋಟಿಸು ಜಾರಿಯಾದ ಬಾಬ್ತು ಅಂಚೆ ಇಲಾಖೆಯವರು ನೀಡಿದ ಟ್ರ್ಯಾಕ್ ಕಂಜಾಯ್ನುಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಆರೋಪಿಯ ಸಾಲದ ಅರ್ಜಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-7 ಎಂದು, ಆರೋಪಿಯ ಸಾಲದ ಕರಾರಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-8 ಎಂದು, ಆರೋಪಿಯ ಸಾಲದ ಡಿಮಾಂಡ ಪ್ರೊಮಿಸರಿ ನೋಟಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-9 ಎಂದು, ಸಾಲಗಾರರು ಮತ್ತು ಜಾಮೀನುದಾರರಿಂದ ಪಡೆದ ಭದ್ರತಾ ಪತ್ರಗಳ ಯಥಾನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-10 ರಿಂದ 12 ಎಂದು, ಸಾಲದ ಖಾತೆಯ ಸ್ಟೇಟಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13 ಎಂದು, ಸಾಲ ಮಂಜೂರಾತಿ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-14 ಎಂದು ಗುರುತಿಸಲಾಯಿತು.

**(ನಿಪಿ-7 ರಿಂದ 12 ಮತ್ತು 14 ರ ಮೂಲ ದಾಖಲೆಗಳನ್ನು ಅವಶ್ಯಕತೆ ಇದ್ದಾಗ ಹಾಜರುಪಡಿಸಬೇಕೆಂಬ ಷರತ್ತಿಗೆ ಒಳಪಟ್ಟು ಸಾಕ್ಷಿಗೆ ವಾಪಸ್ಸು ನೀಡಲಾಯಿತು.)**

**ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ**